**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ 20 ಇಎಸ್‌ಟಿ(8) 2022

**ಆಯುಕ್ತರ ಕಛೇರಿ**,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 10-08-2023.

## ಅಧಿಸೂಚನೆ

ವಿಷಯ: 2023-24ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ವರ್ಗದವರನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ:29-01-2021 ರಂತೆ ಅಧಿಸೂಚಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ ನಿಯಮಗಳು-2021
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ: 29-06-2021.
3. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:06-07-2023.
4. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:20-07-2023.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 335 ಟಿಇಸಿ 2023 ದಿ:01-08-2023.
6. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:01-08-2023.
7. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:05-08-2023.
8. ಈ ಕಛೇರಿ ಅಧೀಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ(8) 2023 ದಿ:08-08-2023.

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಸರ್ಕಾರದ ಅಧಿಸೂಚನೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕರ ವರ್ಗಾವಣೆಗಳನ್ನು ನಿಯಂತ್ರಿಸುವ ಸಲುವಾಗಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು(ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಅನ್ನು ದಿನಾಂಕ: 29-01-2021 ರಿಂದ ಜಾರಿಗೆ ತರಲಾಗಿರುತ್ತದೆ.

ಉಲ್ಲೇಖ (5) ರ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ರ ನಿಯಮ 8 ರನ್ವಯ ಬೋಧಕ ವರ್ಗಾವಣೆಯನ್ನುಕ್ಯಾಲೆಂಡರ್ ವರ್ಷದ ಮೇ ಮತ್ತು ಜುಲೈ ಮಾಹೆಯ ನಡುವೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಪ್ರಸಕ್ತ 2023-24 ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕ ಸಿಬ್ಬಂದಿಗಳ ವರ್ಗಾವಣೆ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗಾಗಿ ಪ್ರಾರಂಭಿಸಲು ತಡವಾಗಿರುವುದರಿಂದ, ಸದರಿ ವರ್ಗಾವಣೆ ಪ್ರಕ್ರಿಯೆಯನ್ನು ದಿನಾಂಕ: 10-08-2023 ರ ಒಳಗಾಗಿ ಪೂರ್ಣಗೊಳಿಸಲು ಅನುಮತಿ ನೀಡಿ ಆದೇಶಿಸಿದೆ.

ಈ ಹಿನ್ನೆಲೆಯಲ್ಲಿ, ಈ ವರ್ಗಾವಣೆ ನಿಯಮಗಳಲ್ಲಿ ಕಲ್ಪಿಸಲಾಗಿರುವ ಅವಕಾಶದಂತೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಈ ಕೆಳಕಂಡ ಬೋಧಕ ವರ್ಗದವರು ದಿನಾಂಕ: 10-08-2023 ರಂದು ನಡೆದ ವರ್ಗಾವಣೆ ಕೌನ್ಸಿಲಿಂಗ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ/ವಿಶೇಷ ಪ್ರಕರಣಗಳಡಿ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ತತ್ಸಂಬಂಧ **ಅನುಬಂಧದಲ್ಲಿ** ನೀಡಿರುವಂತೆ ಬೋಧಕರ ಹೆಸರಿನ ಮುಂದೆ ನಮೂದಿಸಿರುವ ಸಂಸ್ಥೆಗೆ ವರ್ಗಾಯಿಸಿ ಆದೇಶಿಸಿದೆ

**ಸೂಚನೆ:**

1. ವರ್ಗಾವಣೆಗೊಂಡ ಬೋಧಕ ವರ್ಗದವರನ್ನು ದಿನಾಂಕ: 11-08-2023 ರ ಅಪರಾಹ್ನ ಸಂಸ್ಥೆಯ ಕರ್ತವ್ಯದಿಂದ ನೇರವಾಗಿ ಬಿಡುಗಡೆಗೊಳಿಸಲಾಗಿದೆ ಹಾಗೂ ವರ್ಗಾವಣೆ ಆದೇಶದ ಪ್ರತಿಯೊಂದಿಗೆ ವರ್ಗಾವಣೆಗೊಂಡ ಸಂಸ್ಥೆಗೆ ವರದಿ ಮಾಡಿಕೊಳ್ಳಲು ಆದೇಶಿಸಲಾಗಿದೆ.
2. ಸಾರ್ವಜನಿಕ ಹಿತದೃಷ್ಟಿ ಮೇರೆಗೆ ವರ್ಗಾವಣೆಗೊಂಡ ಬೋಧಕ ವರ್ಗದವರು ಕೆ.ಸಿ.ಎಸ್.ಆರ್ ನಿಯಮಗಳಂತೆ ನಿಯಮಾನುಸಾರ ಅನ್ವಯವಾಗುವ ಸೇರಿಕೆ ಕಾಲ ಹಾಗೂ ವರ್ಗಾವಣೆ ಭತ್ಯೆಗೆ ಅರ್ಹರಿರುತ್ತಾರೆ.
3. ಕೋರಿಕೆ ಮೇರೆಗೆ ವರ್ಗಾವಣೆಗೊಂಡ ಬೋಧಕ ವರ್ಗದವರು ಸೇರಿಕೆ ಕಾಲ ಮತ್ತು ವರ್ಗಾವಣೆ ಭತ್ಯೆಗೆ ಅರ್ಹರಿರುವುದಿಲ್ಲ.
4. ವರ್ಗಾವಣೆ ಹೊಂದಿದ ಬೋಧಕ ವರ್ಗದವರು ಜನವರಿ ಮಾಹೆಯ ದಿನಾಂಕ:10-01-2023 ರಿಂದ ನಂತರದ ವೇತನ ಭತ್ಯೆಯನ್ನು ಅವರನ್ನು ವರ್ಗಾಯಿಸಿದ ಸಂಸ್ಥೆಯಲ್ಲಿ ಪಡೆಯತಕ್ಕದ್ದು.

5. ವರ್ಗಾವಣೆ ಹೊಂದುವ ಬೋಧಕ ವರ್ಗದವರು ಸಂಸ್ಥೆಯ ಪ್ರಾಂಶುಪಾಲರ ಕಾರ್ಯಭಾರವನ್ನು ನಿರ್ವಹಿಸುತ್ತಿದ್ದಲ್ಲಿ, ಸಂಸ್ಥೆಯ ಹಿರಿಯ ಬೋಧಕ ವರ್ಗದವರಿಗೆ ಪ್ರಾಂಶುಪಾಲರ ಕಾರ್ಯಭಾರವನ್ನು ವಹಿಸಿಕೊಡತಕ್ಕದ್ದು.

20/8/2023

**ಆಯುಕ್ತರು**
**ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1. ಮೇಲ್ಕಂಡ ಬೋಧಕ ವರ್ಗದವರಿಗೆ ಸಂಬಂಧಪಟ್ಟ ಪ್ರಾಂಶುಪಾಲರ/ಅಧಿಕಾರಿಗಳ ಮೂಲಕ ಪ್ರತಿ.
2. ಎಲ್ಲಾ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ;
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು – ಮಾಹಿತಿಗಾಗಿ;
3. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
4. ಜಂಟಿ ನಿರ್ದೇಶಕರು (ಆಡಳಿತ)/(ಸಿಡಿಸಿ)/(ತನಿಖೆ)/(ಪರೀಕ್ಷೆ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
5. ಆಡಳಿತಾಧಿಕಾರಿ / ರಿಜಿಸ್ಟ್ರಾರ್(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
6. ಇ- ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು);
7. ಡಿವಿಪಿ (1) ಮತ್ತು (2), ಇಎಸ್‌ಟಿ (1), (3), (5), (7), (9) ಮತ್ತು (10) ವಿಭಾಗಗಳಿಗೆ.
8. ಆಯುಕ್ತರ ಆಪ್ತ ಶಾಖೆಗೆ;
9. ಕಛೇರಿ ಪ್ರತಿ.

## ಅನುಬಂಧ

2023-24ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಹೊಂದಿದ ಬೋಧಕ ವರ್ಗದವರ ಪಟ್ಟಿ

| Sl. No. | KGID | NAME | DISCIPLINE/ CADRE | PRESENT WORKING COLLEGE | HK RK | TRANSFERD COLLEGE | REMARKS |
|---|---|---|---|---|---|---|---|
| 1 | 1879355 | SHABANA BEGUM PEERWALE | SOCIAL STUDIES | Government Junior Technical School,Kalaburagi | N | Government Junior Technical School,Bagalkot | **REQUEST** |
| 2 | 1824899 | Z F MUNSHI | HINDI | Government Junior Technical School,Hubballi | N | Government Junior Technical School ,Bhadravathi | **PUBLIC** |
| 3 | 1938140 | SUJATHA A | SOCIAL STUDIES | Government Junior Technical School ,Bhadravathi | N | Government Junior Technical School,Hubballi | **PUBLIC** |

20/8/2023

**ಆಯುಕ್ತರು**
**ಕಾಲೇಜು & ತಾಂತ್ರಿಕ ಶಿಕ್ಷಣ ಇಲಾಖೆ**